# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 596
ಸದಸ್ಯರ ಹೆಸರು : ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 24.09.2020
ಉತ್ತರಿಸುವವರು : ಮುಖ್ಯಮಂತ್ರಿಗಳು

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕೊಡಗು ಜಿಲ್ಲೆಯಲ್ಲಿ ಸಣ್ಣ ಕೈಗಾರಿಕೆ ಅಭಿವೃದ್ಧಿಗಾಗಿ ಮತ್ತು ಅದರ ಆಕರ್ಷಣೆಗಾಗಿ ಯಾವುದಾದರೂ ಯೋಜನೆಗಳನ್ನು ಸರ್ಕಾರ ರೂಪಿಸಿದೆಯೇ; ಹಾಗಿದ್ದಲ್ಲಿನ ಯೋಜನೆಗಳು ಯಾವುವು; (ವಿವರ ನೀಡುವುದು) | ಕೊಡಗು ಜಿಲ್ಲೆಯಷ್ಟಲ್ಲದೇ ರಾಜ್ಯದ ಪಟ್ಟಣ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ಸರ್ಕಾರವು ರೂಪಿಸಿರುವ ಯೋಜನೆಗಳು ಈ ಕೆಳಗಿನಂತಿವೆ:<br><br>ಕೇಂದ್ರ ಸರ್ಕಾರದ ಪ್ರಧಾನಮಂತ್ರಿಗಳ ಉದ್ಯೋಗ ಸೃಜನಾ ಯೋಜನೆಯಡಿ ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸಲು ಗರಿಷ್ಠ ಸಾಲ ರೂ.25 ಲಕ್ಷಗಳವರೆಗೆ ಬ್ಯಾಂಕ್‌ಗಳ ಮೂಲಕ ಸಾಲ ಸೌಲಭ್ಯ ಒದಗಿಸಿ ಸಣ್ಣ ಉದ್ಯಮಗಳನ್ನು ಸ್ಥಾಪಿಸಿ ಸ್ವಯಂಉದ್ಯೋಗ ಕೈಗೊಳ್ಳಲು ಅನುಕೂಲ ಒದಗಿಸಲಾಗುವುದು ಹಾಗೂ ಯೋಜನಾ ವೆಚ್ಚದ ಮೇಲೆ ಶೇ. 15 ರಿಂದ ಶೇ.35 ರವರೆಗೆ ಗರಿಷ್ಠ ರೂ.3.75 ಲಕ್ಷದಿಂದ ರೂ.8.75 ಲಕ್ಷದವರೆಗೆ ಸಹಾಯಧನ ನೀಡಲಾಗುತ್ತಿದೆ.<br><br>ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯ ಮೂಲಕ ಮಹಿಳಾ ಉದ್ದಿಮೆದಾರರಿಗೆ ಶೇಕಡ 4ರ ಬಡ್ಡಿದರದಲ್ಲಿ ರೂ.2.00 ಕೋಟಿಯವರೆಗೂ ಸಾಲ ಸೌಲಭ್ಯ ಒದಗಿಸಲಾಗುತ್ತಿದೆ.<br><br>ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯ ಮೂಲಕ ಸೂಕ್ಷ್ಮ ಮತ್ತು ಸಣ್ಣ ಕೈಗಾರಿಕೆಗಳು ಸ್ಥಾಪಿಸಲು ರೂ.5.00 ಕೋಟಿಗಳವರೆಗೆ ಸಾಲ ಪಡೆದು ನಿಗದಿತ ಸಮಯದಲ್ಲಿ ಮರುಪಾವತಿ ಮಾಡಿದ ಅತಿ ಸಣ್ಣ ಮತ್ತು ಸಣ್ಣ ಕೈಗಾರಿಕಾ ಘಟಕಗಳಿಗೆ 5 ವರ್ಷಗಳ ಅವಧಿಗೆ ಶೇಕಡ 6ರಂತೆ ಬಡ್ಡಿ ಸಹಾಯಧನ ನೀಡಲಾಗುವುದು.<br><br>ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಉದ್ಯಮಶೀಲರಿಗೆ ವಿಶೇಷ ಘಟಕ ಉಪಯೋಜನೆ ಮತ್ತು ಗಿರಿಜನ ಉಪಯೋಜನೆಯಡಿಯಲ್ಲಿ ಶೇ 75 ರಿಯಾಯಿತಿ ದರದಲ್ಲಿ ಕೈಗಾರಿಕಾ ನಿವೇಶನಗಳನ್ನು (ಗರಿಷ್ಠ 2 ಎಕರೆ) ಮತ್ತು ಕೈಗಾರಿಕಾ ಶೆಡ್‌ಗಳನ್ನು ನೀಡಲಾಗುತ್ತಿದೆ.<br><br>ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಉದ್ಯಮಶೀಲರಿಗೆ ವಿಶೇಷ ಘಟಕ ಉಪಯೋಜನೆ ಮತ್ತು ಗಿರಿಜನ ಉಪಯೋಜನೆಯಡಿಯಲ್ಲಿ ಸ್ವಯಂಉದ್ಯೋಗ ಕೈಗೊಳ್ಳಲು ಬ್ಯಾಂಕಿನಿಂದ ಸಾಲ ಒದಗಿಸಿ ಯೋಜನಾ ವೆಚ್ಚದ ಮೇಲೆ ಶೇ 60ರಷ್ಟು ಗರಿಷ್ಠ ರೂ.5.00 ಲಕ್ಷ ಸಹಾಯಧನ ನೀಡಲಾಗುತ್ತಿದೆ.<br><br>ಪರಿಶಿಷ್ಟ ಜಾತಿಯ ಮತ್ತು ಪರಿಶಿಷ್ಟ ಪಂಗಡದ ಮೊದಲ ಪೀಳಿಗೆಯ ಉದ್ಯಮಿದಾರರು ಬ್ಯಾಂಕ್/ ಹಣಕಾಸು ಸಂಸ್ಥೆಗಳಿಂದ ಸಾಲ ಪಡೆದು ಸ್ಥಾಪಿಸುವ ಹೊಸ ಘಟಕಗಳಿಗೆ ಗರಿಷ್ಠ ರೂ.2.00 ಕೋಟಿ ಯೋಜನಾ ವೆಚ್ಚದಲ್ಲಿ The Debt Equity Ratio 2:1 ಪ್ರಕಾರ (2/3 ರಷ್ಟು ಬ್ಯಾಂಕ್/ ಹಣಕಾಸು ಸಂಸ್ಥೆಗಳಿಂದ ಸಾಲ ಮತ್ತು 1/3 ಪ್ರವರ್ತಕರ ಬಂಡವಾಳ) ಘಟಕಕ್ಕೆ ಪ್ರವರ್ತಕ ಬಂಡವಾಳ |

| | | |
|---|---|---|
| | | ಹೂಡಿಕೆಯ 1/3 ರಲ್ಲಿ ಶೇ.50 ರಷ್ಟು ಬಡ್ಡಿರಹಿತ ಗರಿಷ್ಟ ರೂ.33 ಲಕ್ಷ ಸಾಫ್ಟ್ ಸೀಡ್ ಕ್ಯಾಪಿಟಲ್ ಆರ್ಥಿಕ ಸಹಾಯ ನೀಡಲಾಗುತ್ತಿದೆ.<br><br>ದಿನಾಂಕ:01-04-2017 ರಿಂದ ಮೊದಲ ಬಾರಿಗೆ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದವರು ಸ್ಥಾಪಿಸುವ ಸಣ್ಣ ಮತ್ತು ಅತೀ ಸಣ್ಣ ಘಟಕಗಳು ಸಾಲ ಪಡೆಯುವ ಸಂದರ್ಭದಲ್ಲಿ ಕೆ.ಎಸ್.ಎಫ್.ಸಿ ಮತ್ತು ಇತರೇ ಹಣಕಾಸು ಸಂಸ್ಥೆಯವರು ವಿಧಿಸಿರುವ ಪರಿಷ್ಕರಣಾ ಶುಲ್ಕ, ಕಾನೂನು ಶುಲ್ಕ, ಏಕಕಾಲಿಕ ಸಾಲ ವಿತರಣಾ ಶುಲ್ಕ ಮತ್ತು ಇತರೆ ಶುಲ್ಕಗಳನ್ನು ಭರಿಸಲಾಗುತ್ತಿದೆ.<br><br>ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ಉದ್ಯಮಗಳು ದಿನಾಂಕ: 01-04-2017 ರಿಂದ ಪ್ರಾರಂಭವಾಗಿರುವ ಹೊಸ ಸಣ್ಣ ಮತ್ತು ಅತೀ ಸಣ್ಣ ಕೈಗಾರಿಕಾ ಘಟಕಗಳಿಗೆ ಮೊದಲ 5 ವರ್ಷಗಳ ಅವಧಿಗೆ ಪ್ರತಿ ಯುನಿಟ್‌ಗೆ 2 ರೂ.ಗಳಷ್ಟು ವಿದ್ಯುಚ್ಛಕ್ತಿ ಸಹಾಯಧನ ನೀಡಲಾಗುತ್ತಿದೆ.<br><br>ಕರ್ನಾಟಕ ರಾಜ್ಯ ಕೈಗಾರಿಕಾ ನೀತಿ 2020-25 ರಂತೆ ಕೆಳಕಾಣಿಸಿದ ಪ್ರೋತ್ಸಾಹ ಮತ್ತು ರಿಯಾಯಿತಿ ಸೌಲಭ್ಯಗಳನ್ನು ಅರ್ಹ ಕೈಗಾರಿಕೆಗಳಿಗೆ ನೀಡಿ ಉತ್ತೇಜಿಸಲಾಗುತ್ತಿದೆ.<br>1. ಮುದ್ರಾಂಕ ಶುಲ್ಕ ವಿನಾಯಿತಿ<br>2. ನೋಂದಣಿ ಶುಲ್ಕ ರಿಯಾಯಿತಿ.<br>3. ಬಂಡವಾಳ ಹೂಡಿಕೆ ಸಹಾಯಧನ<br>4. ಕಿರು ಮತ್ತು ಸಣ್ಣ ಕೈಗಾರಿಕೆಗಳಿಗೆ ವಿದ್ಯುತ್ ಸಹಾಯಧನ<br>5. ಭೂ ಪರಿವರ್ತನಾ ಶುಲ್ಕ ಮರುಪಾವತಿ.<br>6. ರಫ್ತು ಆಧಾರಿತ ಘಟಕಗಳಿಗೆ ರಿಯಾಯಿತಿ.<br>7. ತ್ಯಾಜ್ಯ ಸಂಸ್ಕರಣಾ ಘಟಕಗಳ ಸ್ಥಾಪನೆಗೆ ಸಹಾಯಧನ.<br>8. ವಿದ್ಯುತ್ ತೆರಿಗೆ ವಿನಾಯಿತಿ<br>9. ತಾಂತ್ರಿಕ ಉನ್ನತೀಕರಣ, ಗುಣಮಟ್ಟ ಪ್ರಮಾಣ ಪತ್ರ ಸಹಾಯಧನ<br>10. ಮಳೆ ನೀರುಕೊಯ್ಲು / ಸಂರಕ್ಷಣೆ ಸಹಾಯಧನ<br><br>ಕರ್ನಾಟಕ ರಾಜ್ಯ ಕೃಷಿ ವಾಣಿಜ್ಯ ಮತ್ತು ಆಹಾರ ಸಂಸ್ಕರಣಾ ನೀತಿ 2015 ರಂತೆ ಕೆಳಕಾಣಿಸಿದ ಪ್ರೋತ್ಸಾಹ ಮತ್ತು ರಿಯಾಯಿತಿ ಸೌಲಭ್ಯಗಳನ್ನು ಅರ್ಹ ಕೈಗಾರಿಕೆಗಳಿಗೆ ನೀಡಿ ಉತ್ತೇಜಿಸಲಾಗುತ್ತಿದೆ.<br>1. ಮುದ್ರಾಂಕ ಶುಲ್ಕ ವಿನಾಯಿತಿ<br>2. ನೋಂದಣಿ ಶುಲ್ಕ ರಿಯಾಯಿತಿ.<br>3. ಬಂಡವಾಳ ಹೂಡಿಕೆ ಸಹಾಯಧನ<br>4. ಬಡ್ಡಿ ಸಹಾಯಧನ<br>5. ಭೂ ಪರಿವರ್ತನಾ ಶುಲ್ಕ ಮರುಪಾವತಿ.<br>6. ಕೃಷಿ ಉತ್ಪನ್ನ ಮಾರುಕಟ್ಟೆತೆರಿಗೆಯಿಂದ ವಿನಾಯಿತಿ.<br>7. ತ್ಯಾಜ್ಯ ಸಂಸ್ಕರಣಾಯಂತ್ರ ಸ್ಥಾಪನೆಗೆ ಸಹಾಯಧನ. |
| ಆ) | ಕೊಡಗು ಜಿಲ್ಲೆಗೆ ಪೂರಕವಾಗುವಂತೆ ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ಮತ್ತು ಪೂರಕ ವಾತಾವರಣವನ್ನು ನಿರ್ಮಿಸಲು ಸರ್ಕಾರದ ಕ್ರಮಗಳೇನು? (ಮಾಹಿತಿ ನೀಡುವುದು) | ಕೊಡಗು ಜಿಲ್ಲೆಯಲ್ಲಿ ನೇಚರ್ಸ್ ಬೆಸ್ಟ್ ಫುಡ್‌ಕ್ಲಸ್ಟರ್ ಸ್ಥಾಪಿಸಲು ಈಗಾಗಲೇ ರೂ.18.80 ಕೋಟಿ ವೆಚ್ಚದ ಯೋಜನೆಯನ್ನು ಸಿದ್ಧಪಡಿಸಿ ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗಿದೆ.<br><br>ಜಿಲ್ಲೆಯಲ್ಲಿ ಕಾಫಿ, ಮೆಣಸು, ಜೇನು ಮುಂತಾದ 100 ಕ್ಕೂ ಹೆಚ್ಚು ಉತ್ಪನ್ನಗಳನ್ನು ಒಳಗೊಂಡ 162 ಕೈಗಾರಿಕೋದ್ಯಮಿಗಳನ್ನು ಒಳಗೊಂಡ ಕ್ಲಸ್ಟರ್ ಸ್ಥಾಪನೆಗೆ ಕ್ರಮ ಕೈಗೊಳ್ಳಲಾಗುತ್ತಿದೆ. |

| | | |
|---|---|---|
| | | ಕೊಡಗು ಜಿಲ್ಲೆಯಲ್ಲಿ ಈ ಕೆಳಗಿನಂತೆ ಕೈಗಾರಿಕಾ ಪ್ರದೇಶ ಮತ್ತು ಕೈಗಾರಿಕಾ ವಸಾಹತುಗಳನ್ನು ಸ್ಥಾಪಿಸಲಾಗಿದೆ:<br><br>ಮಡಿಕೇರಿ ತಾಲ್ಲೂಕಿನ ಮಡಿಕೇರಿಯಲ್ಲಿ, ಸೋಮವಾರಪೇಟೆಯ ತಾಲ್ಲೂಕಿನ ಕುಶಾಲನಗರದಲ್ಲಿ ಕೈಗಾರಿಕಾ ಪ್ರದೇಶ ಮತ್ತು ಕೈಗಾರಿಕಾ ವಸಾಹತುಗಳನ್ನು ಸ್ಥಾಪಿಸಲಾಗಿದ್ದು ಕುಶಾಲನಗರದಲ್ಲಿ 2ನೇ ಹಂತದ ಕೈಗಾರಿಕಾ ವಸಾಹತುವನ್ನು 2015 ರಲ್ಲಿ ವಿಸ್ತರಣೆ ಮಾಡಲಾಗಿದೆ. |

ಸಿಐ114 ಸಿಎಸ್ಐ 2020

(ಬಿ.ಎಸ್.ಯಡಿಯೂರಪ್ಪ)

ಮುಖ್ಯಮಂತ್ರಿ